ಕರ್ನಾಟಕ ಸರ್ಕಾರ

ಆಗಸ್ಟ್ 10, 2016

## ಮಾಜಿ ಸಚಿವ ಬಸವರಾಜ ಪಾಟೀಲ್ ಹುಮ್ನಾಬಾದ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

**ಬೆಂಗಳೂರು, ಆಗಸ್ಟ್ 10:**

ಮಾಜಿ ಸಚಿವ ಬಸವರಾಜ ಪಾಟೀಲ್ ಹುಮ್ನಾಬಾದ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ರಾಜ್ಯ ವಿಧಾನ ಸಭೆಯ ಸದಸ್ಯರಾಗಿ ಹಾಗೂ ರಾಜ ವಿಧಾನ ಪರಿಷತ್‌ನ ಸದಸ್ಯರಾಗಿ ಉಭಯ ಸದನಗಳನ್ನೂ ಪ್ರತಿನಿಧಿಸಿದ ಬಸವರಾಜ ಪಾಟೀಲ್ ಹುಮ್ನಾಬಾದ್ ಅವರು ಬೀದರ್ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಅಪಾರ ಶ್ರಮಿಸಿದ್ದರು.

ಸರಳ ವ್ಯಕ್ತಿತ್ವದ ವಿರಳ ವ್ಯಕ್ತಿಯಾಗಿದ್ದ ಬಸವರಾಜ ಪಾಟೀಲ್ ಹುಮ್ನಾಬಾದ್ ಅವರು ಸ್ನೇಹ ಜೀವಿಯಾಗಿದ್ದರು ಎಂದು ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಬಸವರಾಜ ಪಾಟೀಲ್ ಹುಮ್ನಾಬಾದ್ ಅವರ ಆತ್ಮಕ್ಕೆ ಶಾಂತಿ ದೊರೆಯಲಿ ಹಾಗೂ ಅವರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಪುತ್ರ ಶಾಸಕ ರಾಜಶೇಖರ ಪಾಟೀಲ್ ಸೇರಿದಂತೆ ಕುಟುಂಬ ಎಲ್ಲರಿಗೂ ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

**************

ಡಿ ಪಿ ಎಂ